# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 547
**ಸದಸ್ಯರ ಹೆಸರು** : ಶ್ರೀ ಶರವಣ ಟಿ. ಎ. (ವಿಧಾನಸಭಾ ಕ್ಷೇತ್ರ)
**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
**ಉತ್ತರಿಸಬೇಕಾದ ದಿನಾಂಕ** : 30.01.2026.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಗ್ರಾಚ್ಯುಟಿ ಹಾಗೂ ESI ಸೌಲಭ್ಯ ನೀಡುವ ಪ್ರಸ್ತಾವ ಸರ್ಕಾರದ ಮುಂದೆ ಇದೆಯೇ, ಇದ್ದಲ್ಲಿ ಯಾವ ಕಾಲಮಿತಿಯಲ್ಲಿ ಇವರನ್ನು ಈ ಯೋಜನೆಯಡಿಯಲ್ಲಿ ತರಲಾಗುವುದು; ಇಲ್ಲದಿದ್ದಲ್ಲಿ ಅವರಿಗೆ ಗ್ರಾಚ್ಯುಟಿ ಹಾಗೂ ESI ಸೌಲಭ್ಯ ನೀಡಲು ಇರುವ ತೊಂದರೆಗಳೇನು: | ದಿನಾಂಕ: 04.02.2023ರ ಸರ್ಕಾರದ ಮಾರ್ಗಸೂಚಿ ಅನ್ವಯ 2023-24ನೇ ಸಾಲಿನಿಂದ ನಿವೃತ್ತರಾಗಿರುವ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರಿಗೆ ಗ್ರಾಚ್ಯುಟಿ ಪಾವತಿಸಲಾಗುತ್ತಿದೆ.<br><br>ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿ ಹುದ್ದೆಯು ಗೌರವಧನ ಆಧಾರಿತ ಹುದ್ದೆಯಾಗಿರುವುದರಿಂದ ESI ಸೌಲಭ್ಯ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಆ) | ಅಂಗನವಾಡಿ ಕಾರ್ಯಕರ್ತೆಯರು ಮತು ಸಹಾಯಕಿಯರಿಗೆ ನೀಡುತ್ತಿರುವ ಗೌರವಧನ ಹಾಗೂ ರಾಜ್ಯದ ಅಂಗನವಾಡಿಗಳಲ್ಲಿ ಪ್ರತಿ ಮಗುವಿಗೆ ನೀಡುತ್ತಿರುವ ಯೂನಿಟ್ ದರ ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಗೌರವಧನವು ಕೇಂದ್ರ ಪುರಸ್ಕೃತ ಯೋಜನೆಯಡಿ ಒಳಗೊಂಡಿರುತ್ತದೆ. 2022-23ನೇ ಸಾಲಿನ ಆಯವ್ಯಯ ಘೋಷಣೆಯಂತೆ ಸೇವಾ ಆಧಾರಿತ ಮೇರೆಗೆ ಗೌರವಧನವನ್ನು ಹೆಚ್ಚಿಸಲಾಗಿತ್ತು.<br><br>ಮುಂದುವರೆದು, 2025-26ನೇ ಸಾಲಿನ ಆಯವ್ಯಯ ಘೋಷಣೆಯಂತೆ ಪ್ರತಿ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.1,000/-ಗಳು ಹಾಗೂ ಅಂಗನವಾಡಿ ಸಹಾಯಕಿಯರಿಗೆ ರೂ.750/-ಗಳನ್ನು ಮಾಸಿಕ ರಾಜ್ಯದ ವತಿಯಿಂದ ಹೆಚ್ಚಿಸಲಾಗಿರುತ್ತದೆ.<br><br>ಪ್ರಸ್ತುತ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಹೆಯಾನ ರೂ. 12000 ರಿಂದ 12500 ರ ವರೆಗೆ ಗೌರವಧನವನ್ನು ಹಾಗೂ<br><br>ಅಂಗನವಾಡಿ ಸಹಾಯಕಿಯರಿಗೆ ಮಾಹೆಯಾನ ರೂ. 7000 ರಿಂದ 7500 ರ ವರೆಗೆ ಗೌರವಧನವನ್ನು ಪಾವತಿಸಲಾಗುತ್ತಿದೆ.<br><br>ಮುಂದುವರೆದು, ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ಪ್ರತಿ ಮಗುವಿಗೆ ನೀಡಲಾಗುತ್ತಿರುವ ಪೂರಕ ಪೌಷ್ಠಿಕ ಆಹಾರ ಘಟಕ ವೆಚ್ಚ ಹೆಚ್ಚಿಸುವಂತೆ ಈಗಾಗಲೇ ಹಲವು ಬಾರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. |
| ಇ) | 2017-18ನೇ ಸಾಲಿನಲ್ಲಿ ಪ್ರಾರಂಭಿಸಿದ 100 ಅಂಗನವಾಡಿ ಕೇಂದ್ರಗಳಿಗೆ ಕೇಂದ್ರದಿಂದ ಅನುದಾನ ನೀಡದಿರಲು ಕಾರಣಗಳೇನು, ಕೇಂದ್ರ | 2017-18ನೇ ಸಾಲಿನಲ್ಲಿ ಪ್ರಾರಂಭಿಸಿದ 100 ಅಂಗನವಾಡಿ ಕೇಂದ್ರಗಳು ಪೂರ್ಣವಾಗಿ ರಾಜ್ಯ ಸರ್ಕಾರದ ಅನುದಾನದಲ್ಲಿ ಕಾರ್ಯನಿರ್ವಹಿಸುತ್ತಿವೆ. ಸದರಿ ಅಂಗನವಾಡಿ ಕೇಂದ್ರಗಳನ್ನು ಸಹ ಕೇಂದ್ರ ಪುರಸ್ಕೃತ ಯೋಜನೆಯಡಿ ಸೇರ್ಪಡಿಸಲು |

| | | |
|---|---|---|
| | ಅನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ಸಂಪೂರ್ಣ ಮಾಹಿತಿ ನೀಡುವುದು) | ಕೇಂದ್ರ ಸರ್ಕಾರಕ್ಕೆ ಹಲವು ಬಾರಿ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಕೇಂದ್ರ ಸರ್ಕಾರದಿಂದ ಮಂಜೂರಾತಿ ದೊರೆತಿರುವುದಿಲ್ಲ. ಸದರಿ ಕೇಂದ್ರಗಳ ನಿರ್ವಹಣಾ ವೆಚ್ಚಗಳನ್ನು ಸಂಪೂರ್ಣವಾಗಿ ರಾಜ್ಯ ಸರ್ಕಾರವೇ ಭರಿಸುತ್ತಿದೆ. |
| ಈ) | ಯಾವ ಕಾಲ ಮಿತಿಯಲ್ಲಿ ಸದರಿ ಅಂಗನವಾಡಿ ಕೇಂದ್ರಗಳನ್ನು ಕೇಂದ್ರ ಅನುದಾನಕ್ಕೆ ಒಳಪಡಿಸಲಾಗುವುದು? | ಕೇಂದ್ರ ಸರ್ಕಾರದ ಮಂಜೂರಾತಿ ಪಡೆದ ಕೂಡಲೇ ಸದರಿ ಅಂಗನವಾಡಿ ಕೇಂದ್ರಗಳನ್ನು ಕೇಂದ್ರ ಅನುದಾನಕ್ಕೆ ಒಳಪಡಿಸಲಾಗುವುದು. |

**ಸಂಖ್ಯೆ: ಮಮಇ 40 ಐಸಿಡಿ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು